# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ವಿವಿಧ ತಾಲ್ಲೂಕು ಪಂಚಾಯತಿಗಳ ಮತ್ತು ಅವುಗಳ ವ್ಯಾಪ್ತಿಯ ಇಲಾಖೆಗಳಲ್ಲಿ ತೆರವಾದ ಹುದ್ದೆಗಳು ಭರ್ತಿಯಾದ್ದರಿಂದ ಅಧಿಕಾರಿ/ಸಿಬ್ಬಂದಿಯವರ ವೇತನ/ದಿನಗೂಲಿ ನೌಕರರ ಉಪನದನ ಹಾಗೂ ಹೊರಗುತ್ತಿಗೆ ಸಿಬ್ಬಂದಿಯವರ ಸಂಭಾವನೆ ಪಾವತಿಗಾಗಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014.
2. ಆರ್ಥಿಕ ಇಲಾಖೆ ವೆಚ್ಚ 3 ಹಾಗೂ ತಾಲ್ಲೂಕು ಪಂಚಾಯತಿಗಳ ಕಾರ್ಯ ನಿರ್ವಾಹಕ ಅಧಿಕಾರಿಗಳ ಪತ್ರಗಳು.

**ಪ್ರಸ್ತಾವನೆ:**

ವಿವಿಧ ತಾಲ್ಲೂಕು ಪಂಚಾಯತಿ ಮತ್ತು ಇಲಾಖೆಗಳಲ್ಲಿ ತೆರವಾದ ಹುದ್ದೆಗಳು ಭರ್ತಿಯಾದ್ದರಿಂದ ವೇತನ/ದಿನಗೂಲಿ ನೌಕರರ ಉಪದನ ಹಾಗೂ ಹೊರಗುತ್ತಿಗೆ ಸಿಬ್ಬಂದಿಯವರ ಸಂಭಾವನೆ ವೆಚ್ಚಕ್ಕಾಗಿ ಪ್ರಧಾನ ಲೆಕ್ಕ ಶೀರ್ಷಿಕೆ 2202, 2225, 2403 ಮತ್ತು 2515ರಡಿ ಒಟ್ಟು ರೂ.1812.08ಲಕ್ಷಗಳನ್ನು ಬಿಡುಗಡೆಗೊಳಿಸಲು ಪ್ರಸ್ತಾಪಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ತಾಲ್ಲೂಕು ಪಂಚಾಯತ್ ಕಾರ್ಯಕ್ರಮದಡಿ ರೂ.1812.08ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-197-1-10-300ರಿಂದ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 435 ವೆಚ್ಚ 6/2022(ಇ) ದಿನಾಂಕ: 10ನೇ ಜೂನ್ 2022

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ತಾಲ್ಲೂಕು ಪಂಚಾಯತಿಗೆ ಕಾಲಂ 3ರ ಕಾರ್ಯಕ್ರಮದಡಿ ವೇತನ/ದಿನಗೂಲಿ ನೌಕರರ ಉಪದನ ಹಾಗೂ ಹೊರಗುತ್ತಿಗೆ ಸಿಬ್ಬಂದಿಯವರ ಸಂಭಾವನೆ ಪಾವತಿಗಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ರೂ.1812.08ಲಕ್ಷ(ರೂಪಾಯಿ ಹದಿನೆಂಟು ನೂರ ಹನ್ನೆರಡು ಲಕ್ಷದ ಎಂಟು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ.

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು. ಲೆಕ್ಕ ಶೀರ್ಷಿಕೆ 2515-00-102-0-63-021, 033, 034 ಮತ್ತು 251ರಡಿ ಬಿಡುಗಡೆಗೊಳಿಸಿದ ಅನುದಾನಕ್ಕೆ ಮರು ಹೊಂದಾಣಿಕೆಯ ಅಗತ್ಯವಿರುವುದಿಲ್ಲ. ಸದರಿ ವೆಚ್ಚವನ್ನು ಅದೇ ಕಾರ್ಯಕ್ರಮದಡಿ ವೆಚ್ಚ ಭರಿಸತಕ್ಕದ್ದು

ಬಿಡುಗಡೆಗೊಳಿಸಿದ ಈ ಅನುದಾನವನ್ನು ಪ್ರಸ್ತಾವಿತ ವೆಚ್ಚವನ್ನು ಆದ್ಯತೆಯ ಮೇಲೆ ವೆಚ್ಚ ಮಾಡತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಕಾರ್ಯನಿರ್ವಾಹಕ ಅಧಿಕಾರಿಗಳು/ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು

ಮುಂದುವರೆದಿದೆ……..

| ಕ್ರ.ಸಂ | ತಾಲ್ಲೂಕು ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಬಿಡುಗಡೆಗೊಳಿಸಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| (1) | (2) | (3) | (4) |
| 1 | ಯಲಹಂಕ | 2403-00-101-0-61-005 | 191.85 |
| 2 | | 2202-00-102-0-62-005 | 852.27 |
| 3 | ವಡಗೇರ | 2202-00-102-0-62-005 | 300.00 |
| 4 | ಟಿ.ನರಸೀಪುರ | 2515-00-102-0-63-251 | 3.36 |
| 5 | ಕಮಲಾಪುರ | 2202-00-102-0-62-005 | 444.63 |
| 6 | ಸುಳ್ಯ | 2515-00-102-0-63-034 | 16.44 |
| 7 | ಕುಂದಾಪುರ | 2225-00-103-0-74-005 | 3.53 |
| | | ಒಟ್ಟು | **1812.08** |

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ**

(ಶ್ರೀಕೃಷ್ಣ ಎನ್. ಬುಗಟ್ಯಾಗೋಳ)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ
ಆರ್ಥಿಕ ಇಲಾಖೆ

1.ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2.ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಗ್ರಾ.ಅ.ಪ./ಹಿಂ.ವ.ಕಲ್ಯಾಣ/ಪಶು ಸಂಗೋಪನ ಇಲಾಖೆ.
3.ಆಯುಕ್ತರು, ಖಜಾನೆ ಆಯುಕ್ತಾಲಯ, 5 & 6ನೇ ಮಹಡಿ, ಕೆಪಿಟಿಸಿಎಲ್ ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು.
4.ಸಂಬಂಧಪಟ್ಟ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು,
5.ಸಂಬಂಧಿಸಿದ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು
6.ಸಂಬಂಧಪಟ್ಟ ಜಿಲ್ಲಾ/ಉಪ ಖಜಾನಾಧಿಕಾರಿಗಳು,
7.ರಕ್ಷಾ ಕಡತಕ್ಕೆ
8.ಹೆಚ್ಚುವರಿ ಪ್ರತಿ